ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

17

ಇಲಾಖೆ / ವಿಷಯ : DEPARTMENT / SUBJECT: ವಿಜ್ಞಾನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 15/12/20

# ಖ್ಯಾತ ವೈಮಾನಿಕ ವಿಜ್ಞಾನಿ ರೊದ್ದಂ ನರಸಿಂಹ ಇನ್ನಿಲ್ಲ

15/12/20

## ಮಿದುಳಿನ ರಕ್ತಸ್ರಾವದಿಂದ ನಗರದ ಖಾಸಗಿ ಆಸ್ಪತ್ರೇಲಿ ನಿಧನ
## ವೈಮಾನಿಕ ನೀತಿ ನಿರೂಪಣೆಯಲ್ಲಿ ಪ್ರಮುಖ ಪಾತ್ರಧಾರಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು
ದೇಶದ ಖ್ಯಾತ ವೈಮಾನಿಕ ವಿಜ್ಞಾನಿ, ಪದ್ಮ ವಿಭೂಷಣ ರೊದ್ದಂ ನರಸಿಂಹ (87) ತೀವ್ರ ಅನಾರೋಗ್ಯದಿಂದ ಸೋಮವಾರ ರಾತ್ರಿ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನ ಹೊಂದಿದ್ದಾರೆ.



ಮೆದುಳು ರಕ್ತಸ್ರಾವ (ಬ್ರೈನ್ ಹೆಮರೇಜ್) ಹಾಗೂ ಪಾರ್ಶ್ವವಾಯು ಸಮಸ್ಯೆ ಉಂಟಾಗಿ ಕಳೆದ ವಾರ ಕೋಮಾ ಸ್ಥಿತಿಯಲ್ಲಿ ಎಂ.ಎಸ್.ರಾಮಯ್ಯ ಆಸ್ಪತ್ರೆಗೆ ಕರೆತರಲಾಗಿತ್ತು. ಈ ವೇಳೆ ಮೆದುಳಿನಲ್ಲಿ ತೀವ್ರ ರಕ್ತಸ್ರಾವ ಉಂಟಾಗಿದ್ದರಿಂದ ಶಸ್ತ್ರಚಿಕಿತ್ಸೆ ನಡೆಸಲು ಸಮಸ್ಯೆ ಉಂಟಾಗಿ ಕುಟುಂಬದ ಸದಸ್ಯರೊಂದಿಗೆ ಚರ್ಚಿಸಿ ಔಷಧಗಳ ಮೂಲಕ ನಿರ್ವಹಣೆ ಮಾಡಲು ಪ್ರಯತ್ನಿಸಿದರೂ ರೊದ್ದಂ ನರಸಿಂಹ ಅವರು ಔಷಧಗಳಿಗೆ ಸ್ಪಂದಿಸಿಲ್ಲ.

ಈ ಬಗ್ಗೆ 'ಕನ್ನಡಪ್ರಭ'ಕ್ಕೆ ಮಾಹಿತಿ ನೀಡಿದ ಎಂ.ಎಸ್.ರಾಮಯ್ಯ ಆಸ್ಪತ್ರೆ ನ್ಯೂರೋ ವಿಭಾಗದ ಡಾ। ಸುನೀಲ್, 'ರೊದ್ದ ನರಸಿಂಹ ಅವರಿಗೆ ಕಳೆದ ಕೆಲವು ವರ್ಷಗಳಿಂದ ಹೃದಯ ಸಮಸ್ಯೆ ಇತ್ತು. ಎರಡು ವರ್ಷದ ಹಿಂದೆ ಪಾರ್ಶ್ವವಾಯು ಸಮಸ್ಯೆಯೂ ಆಗಿತ್ತು. ಕಳೆದ ವಾರ ರಾಮಯ್ಯ ಆಸ್ಪತ್ರೆಗೆ ಕರೆತಂದಾಗ ಪ್ರಜ್ಞಾಹೀನಸ್ಥಿತಿಯಲ್ಲಿದ್ದು ಮೆದುಳಿನಲ್ಲಿ ತೀವ್ರ ರಕ್ತಸ್ರಾವ ಉಂಟಾಗಿತ್ತು. ಕೂಡಲೇ ವೆಂಟಿಲೇಟರ್ ವ್ಯವಸ್ಥೆ ಕಲ್ಪಿಸಿ ಕುಟುಂಬದವರೊಂದಿಗೆ ಚರ್ಚಿಸಿ ತೀವ್ರ ರಕ್ತಸ್ರಾವ ಉಂಟಾಗಿದ್ದ ಹಿನ್ನೆಲೆಯಲ್ಲಿ 'ಕನ್ಸರ್ವೇಟಿವ್ ಮೆತಡ್' ಮೂಲಕ ಚಿಕಿತ್ಸೆಗೆ ಯತ್ನಿಸಿದೆವು. ಮೆದುಳಿನಲ್ಲಿ ರಕ್ತಸ್ರಾವ ಹೆಚ್ಚಾಗಿದ್ದರಿಂದ ಚಿಕಿತ್ಸೆಗೆ ಸ್ಪಂದಿಸಿಲ್ಲ' ಎಂದು ಹೇಳಿದರು. ರೊದ್ದಂ ನರಸಿಂಹ ಅವರ ನಿಧನಕ್ಕೆ ವಿಜ್ಞಾನ ಕ್ಷೇತ್ರದ ಪ್ರಮುಖರು ಕಂಬನಿ ಮಿಡಿದಿದ್ದಾರೆ.

**ಖ್ಯಾತ ವೈಮಾನಿಕ ವಿಜ್ಞಾನಿ:** ಭಾರತ ಸರ್ಕಾರದ ವೈಮಾನಿಕ ಕ್ಷೇತ್ರದ ನೀತಿ ನಿರೂಪಣೆಯಲ್ಲಿ ರೊದ್ದಂ ಸಕ್ರಿಯವಾಗಿ ತೊಡಗಿಸಿಕೊಂಡಿದ್ದರು. ಭಾರತೀಯ ವೈಮಾನಿಕ ವಿಜ್ಞಾನಿಯಾಗಿದ್ದ ಅವರು ಬೆಂಗಳೂರಿನ ಪ್ರತಿಷ್ಠಿತ ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿ (ಐಐಎಸ್‌ಸಿ) ಏರೋಸ್ಪೇಸ್ ಎಂಜಿನಿಯರಿಂಗ್‌ನ ಪ್ರಾಧ್ಯಾಪಕರಾಗಿ ಹಲವು ವರ್ಷ ಸೇವೆ ಸಲ್ಲಿಸಿದ್ದರು. ಅಲ್ಲದೆ ನ್ಯಾಷನಲ್ ಏರೋಸ್ಪೇಸ್ ಲ್ಯಾಬೋರೇಟರಿ (ಎನ್‌ಎಎಲ್) ನಿರ್ದೇಶಕರಾಗಿ, ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಅಡ್ವಾನ್ಸಡ್ ಸ್ಟಡೀಸ್ (ನಿಯಾಸ್) ನಿರ್ದೇಶಕರಾಗಿ, ಮುಂದುವರೆದ ವೈಜ್ಞಾನಿಕ ಸಂಶೋಧನೆಗಾಗಿ ಬೆಂಗಳೂರಿನಲ್ಲಿರುವ ಜವಾಹರಲಾಲ್ ನೆಹರು ಕೇಂದ್ರದ ಮೆಕ್ಯಾನಿಕ್ಸ್ ಘಟಕದ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು. ಹೈದರಾಬಾದ್‌ನ ಪ್ರತಿಷ್ಠಿತ ವಿಜ್ಞಾನ ಮತ್ತು ಎಂಜಿನಿಯರಿಂಗ್ ಸಂಸ್ಥೆ ಸೇರಿದಂತೆ ಹಲವು ಸಂಸ್ಥೆಗಳಲ್ಲಿ ಸೇವೆ ಸಲ್ಲಿಸಿದ್ದರು.

1953ರಲ್ಲಿ ಮೈಸೂರು ವಿಶ್ವವಿದ್ಯಾಲಯದಲ್ಲಿ (ಯುನಿವರ್ಸಿಟಿ ಕಾಲೇಜ್ ಆಫ್ ಎಂಜಿನಿಯರಿಂಗ್) ಬಿಇ ಪದವಿ ಪಡೆದಿದ್ದ ಅವರು 1955ರಲ್ಲಿ ಬೆಂಗಳೂರಿನ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್‌ನಲ್ಲಿ (ಐಐಎಸ್ಸಿ) ಎಂಇ ಪದವಿ ಪಡೆದರು. 1962 ರಲ್ಲಿ ಐಎಸ್ಎಸ್ಸಿಯಲ್ಲಿ ಸೇವೆ ಆರಂಭಿಸಿದ ಅವರು 1999ರವರೆಗೆ ಐಐಎಸ್ಸಿಯ ಏರೋನಾಟಿಕಲ್ ಸೈನ್ಸ್ ವಿಭಾಗದಲ್ಲಿ ವಿವಿಧ ಹುದ್ದೆಗಳನ್ನು ನಿಭಾಯಿಸಿದ್ದರು. ಈ ವೇಳೆ ಪ್ರೊ. ಸತೀಶ್ ಧವನ್ ಅವರೊಂದಿಗೂ ಕೆಲಸ ಮಾಡಿದ್ದರು.

1961ರಲ್ಲಿ ಯು.ಎಸ್‌ನ ಕ್ಯಾಲಿಫೋರ್ನಿಯಾ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯಲ್ಲಿ ಪಿಎಚ್‌ಡಿ ಪದವಿ ಪೂರೈಸಿದ್ದರು. 1982ರಲ್ಲಿ ಸೆಂಟರ್ ಫಾರ್ ಅಟ್ಮಾಸ್ಫರಿಕ್ ಸೈನ್ಸಸ್ ಕೇಂದ್ರ ಸ್ಥಾಪಿಸಿ 1989ರವರೆಗೆ ಮುಖ್ಯಸ್ಥರಾಗಿ ಕಾರ್ಯನಿರ್ವಹಿಸಿದ್ದರು. 1984 ರಿಂದ 1993ರವರೆಗೆ ಎನ್‌ಎಎಲ್ ನಿರ್ದೇಶಕರಾಗಿದ್ದ ಅವರು ಏರೋಸ್ಪೇಸ್ ಫ್ಲ್ಯುಯೆಡ್ ಡೈನಾಮಿಕ್‌ನಲ್ಲಿ ತಜ್ಞರಾಗಿದ್ದರು.